# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 456 |
| ಸದಸ್ಯರ ಹೆಸರು | : | ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.12.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಸಾರ್ವಜನಿಕವಾಗಿ ಕಿರಾಣಿ/ಡಬ್ಬಾ ಅಂಗಡಿಗಳಲ್ಲಿ ಅವ್ಯಾಹತವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ಕೈಕೊಂಡ ಕ್ರಮಗಳೇನು? | ವಿಜಯಪುರ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ತಡೆಗಟ್ಟಲು ಎಲ್ಲಾ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಿಯಮಿತವಾಗಿ ಅಂಗಡಿ, ಹೋಟೆಲ್, ಡಬ್ಬಾ ಅಂಗಡಿಗಳನ್ನು ಆಗಿಂದಾಗ್ಗೆ ಪರಿಶೀಲಿಸಲಾಗುತ್ತಿದ್ದು, ಅಕ್ರಮ ಮದ್ಯ ಮಾರಾಟದಲ್ಲಿ ತೊಡಗಿರುವವರ ಮೇಲೆ ಪ್ರಕರಣ ದಾಖಲಿಸಿ ಕಾನೂನು ರೀತ್ಯಾ ಕ್ರಮ ಕೈಕೊಳ್ಳಲಾಗುತ್ತಿದೆ. ವರ್ಷವಾರು ಪ್ರಕರಣಗಳ ಮಾಹಿತಿ ಈ ಕೆಳಗಿನಂತಿದೆ:- |

| ವರ್ಷ | ಪ್ರಕರಣಗಳ ಸಂಖ್ಯೆ | ಆರೋಪಿತರ ಸಂಖ್ಯೆ | ವಶಪಡಿಸಿಕೊಂಡ ಅಕ್ರಮ ಮದ್ಯ (ಲೀಟರಗಳಲ್ಲಿ) | ಮೌಲ್ಯ (ರೂಗಳಲ್ಲಿ) |
|---|---|---|---|---|
| 2022 | 456 | 425 | 798.8 | 6,10,756 |
| 2023 | 358 | 405 | 5108.8 | 21,75,302 |
| 2024 | 277 | 335 | 872.1 | 6,45,629 |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಆ) | ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಕೆಲವೊಂದು ಪೊಲೀಸ್ ಅಧಿಕಾರಿಗಳು ಶಾಮೀಲಾಗಿ ಇವರಿಗೆ ಸಹಕರಿಸುತ್ತಿದ್ದು, ಕಾನೂನು ಬಾಹಿರವಾಗಿ ಮದ್ಯ ಮಾರಾಟಕ್ಕೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಈ ರೀತಿ ಶಾಮೀಲಾಗಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಶಿಸ್ತು ಕ್ರಮಗಳನ್ನು ಕೈಕೊಂಡಿದೆ? (ವಿವರ ನೀಡುವುದು) | ವಿಜಯಪುರ ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿರುವವರ ಜೊತೆಗೆ ಯಾವುದೇ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವುದಿಲ್ಲ. ಅಂತಹ ಪ್ರಕರಣಗಳು ಕಂಡು ಬಂದಲ್ಲಿ ಅಂತವರ ಮೇಲೆ ಇಲಾಖಾ ನಿಯಮಗಳಡಿ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುತ್ತದೆ. |

ಸಂಖ್ಯೆ: 625 ಎಸ್ ಎಸ್ ಟಿ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು